**ಮೈಸೂರು ವಿಶ್ವವಿದ್ಯಾನಿಲಯ**

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-05

ಸಂಖ್ಯೆ: ಎಸಿ4/01/2025-26 **ದಿನಾಂಕ 02-09-2025**

## ಸುತ್ತೋಲೆ

ವಿಷಯ: 2025-26ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಪ್ರಥಮ ವರ್ಷಕ್ಕೆ ಪ್ರವೇಶಾತಿ ಮಾಡಿಕೊಳ್ಳಲು ಕೊನೆ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: 1. ವಿಶ್ವವಿದ್ಯಾನಿಲಯದ ಸಮಸಂಖ್ಯೆ ಸುತ್ತೋಲೆ ದಿನಾಂಕ 08-07-2025.
2. ಮಾನ್ಯ ಕುಲಪತಿಯವರ ಆದೇಶ ದಿನಾಂಕ 02-09-2025.

*****

ಉಲ್ಲೇಖ(1)ರ ಸುತ್ತೋಲೆಯಲ್ಲಿ 2025-26ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿ ಪ್ರೋಗ್ರಾಂಗಳ ಪ್ರಥಮ ವರ್ಷದ ಪ್ರವೇಶಾತಿಗೆ ದಿನಾಂಕ 30-08-2025ನ್ನು ಅಂತಿಮ ದಿನಾಂಕವಾಗಿ ನಿಗದಿಪಡಿಸಲಾಗಿತ್ತು. ಹಲವು ಕಾಲೇಜುಗಳ ಮನವಿಯ ಮೇರೆಗೆ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪರೀಕ್ಷೆ ತೆಗೆದುಕೊಳ್ಳಲು ನಿಗದಿತ ಹಾಜರಾತಿ ಕೊರತೆಯಾಗದಂತೆ ವಿಶೇಷ ತರಗತಿಗಳನ್ನು ತೆಗೆದುಕೊಂಡು ಸರಿದೂಗಿಸುವ ಷರತ್ತಿಗೆ ಒಳಪಟ್ಟು ಪ್ರಥಮ ವರ್ಷದ ಪ್ರವೇಶಾತಿ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಲಾಗಿದೆ.

| | |
|---|---|
| ದಿನಾಂಕ **10-09-2025ರವರೆಗೆ** | ರೂ.500/- ಗಳ ದಂಡ ಶುಲ್ಕ ಸಹಿತ |

ಈ ವಿದ್ಯಾರ್ಥಿಗಳಿಂದ offlineನಲ್ಲಿ ಸಂಗ್ರಹವಾದ ಶುಲ್ಕವನ್ನು ವಿಶ್ವವಿದ್ಯಾನಿಲಯದ ಸಾಮಾನ್ಯ ರೆವಿನ್ಯೂ ಖಾತೆಗೆ ಜಮಾ ಮಾಡಿ ದಿನಾಂಕ: 12-09-2025ರ ಒಳಗೆ ಪ್ರವೇಶಾತಿ ಅನುಮೋದನೆಗಾಗಿ ವಿಶ್ವವಿದ್ಯಾನಿಲಯಕ್ಕೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ವಿಶೇಷ ಸೂಚನೆ: **ಮೇಲೆ ಸೂಚಿಸಿರುವ ಕೊನೆಯ ದಿನಾಂಕದ ನಂತರ ಬರುವ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.**

2/9/2025
ಕುಲಸಚಿವರು
ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು

ಇವರಿಗೆ;

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಸೂಕ್ತ ಕ್ರಮಕ್ಕಾಗಿ.
2. ಕುಲಸಚಿವ(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು - ಪ್ರವೇಶಾತಿ ಅನುಮೋದನೆಯಾದ ವಿದ್ಯಾರ್ಥಿಗಳಿಗೆ ಮಾತ್ರ ಪರೀಕ್ಷಾ ಪ್ರವೇಶ ಪತ್ರಗಳನ್ನು ವಿತರಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲು ತಿಳಿಸಿದೆ.
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು - ಸಂಬಂಧಿಸಿದ ಖಾತೆಗಳಿಗೆ ಆಯಾ ಶುಲ್ಕಗಳನ್ನು ಪಾವತಿಸುವಂತೆ ಕಾಲೇಜುಗಳಿಗೆ ತಿಳಿಸಲಾಗಿದೆ. ಆದಾಗ್ಯೂ ಆಯಾ ಖಾತೆಗಳಿಗೆ ಅನುಗುಣವಾಗಿ ಚಲನ್‌ಗಳನ್ನು ತಕ್ಷಣ ಮುದ್ರಿಸಿ ಸಂಬಂಧಪಟ್ಟ ಬ್ಯಾಂಕುಗಳಿಗೆ/ಕಾಲೇಜುಗಳಿಗೆ ಒದಗಿಸಲು ತಿಳಿಸಿದೆ.
4. ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ/ವಾಣಿಜ್ಯ/ಕಲಾ ಮತ್ತು ಕಾನೂನು ನಿಕಾಯಗಳು, ಮೈ.ವಿ.ವಿ.ನಿಲಯ, ಮೈಸೂರು.
5. ನಿರ್ದೇಶಕರು, ಸ್ಕೂಲ್ ಆಫ್ ಲಾ, ಮಾನಸಗಂಗೋತ್ರಿ, ಮೈಸೂರು.
6. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೌಲ್ಯ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮಾನಸಗಂಗೋತ್ರಿ, ಮೈಸೂರು.
7. ನಿರ್ದೇಶಕರು, ಅಂತರ್‌ರಾಷ್ಟ್ರೀಯ ಕೇಂದ್ರ, ವಿಶ್ವವಿದ್ಯಾನಿಲಯ ಲಲಿತ ಕಲೆಗಳ ಕಾಲೇಜು ಆವರಣ, ಮಾನಸಗಂಗೋತ್ರಿ, ಮೈಸೂರು.
8. ನಿರ್ದೇಶಕರು, ಪಿ.ಎಂ.ಇ. ಬೋರ್ಡ್, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನ ಕಛೇರಿ, ಮಾನಸಗಂಗೋತ್ರಿ, ಮೈಸೂರು.
10. ಸಂಯೋಜಕರು, ಐಸಿಡಿ, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು - **ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕಾಗಿ ಕೋರಿದೆ.**
11. ಉಪಕುಲಸಚಿವ/ಅಧೀಕ್ಷಕರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿಶೇಷ ಘಟಕ, ಮಹಾರಾಜ ಕಾಲೇಜು ಶತಮಾನೋತ್ಸವ ಭವನ ಕಟ್ಟಡ, ಮೈವಿವಿ, ಮೈಸೂರು.
12. ಸಂಬಂಧಪಟ್ಟ ಎಲ್ಲಾ ಉಪ ಕುಲಸಚಿವ/ಸಹಾಯಕ ಕುಲಸಚಿವ/ಅಧೀಕ್ಷಕರು/ಶೈಕ್ಷಣಿಕ ವಿಭಾಗದ ಎಲ್ಲಾ ವಿಷಯ ನಿರ್ವಾಹಕರಿಗೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈ.ವಿ.ವಿ, ಮೈಸೂರು.
14. ಕಛೇರಿ ಪ್ರತಿ.